# All India Radio: Bangalore
# Regional Bulletin In Kannada
# 06.11.2025 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 06.11.2025 / 6.40 p.m.

***************

ಮುಖ್ಯಾಂಶಗಳು

೧. ಕಬ್ಬು ಬೆಳೆಗಾರರು, ಸಕ್ಕರೆ ಕಾರ್ಖಾನೆಗಳ ಮಾಲೀಕರೊಂದಿಗೆ ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಭೆ

೨. ಕೇಂದ್ರ ಸರ್ಕಾರ ಕಬ್ಬಿಗೆ ಸೂಕ್ತ ಎಫ್‌ಆರ್‌ಪಿ ದರ ನಿಗದಿಪಡಿಸಬೇಕು - ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ಆಗ್ರಹ

೩. ದೇಶದ ಪೌಷ್ಠಿಕಾಂಶ ಭದ್ರತೆ ಗುರಿ ಸಾಧಿಸಲು ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯೊಂದಿಗೆ ಕೈಜೋಡಿಸಿದ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆ

೪. ಮಂಡ್ಯ ಜಿಲ್ಲೆಯಲ್ಲಿ ಶೀಘ್ರ ಕೈಗಾರಿಕೆ ಸ್ಥಾಪನೆ - ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ

***************

ಕಬ್ಬು ಬೆಳೆಗಾರರ ಸಮಸ್ಯೆ ಹಿನ್ನೆಲೆಯಲ್ಲಿ ವಿಧಾನಸೌಧದಲ್ಲಿ ನಾಳೆ ಬೆಳಗ್ಗೆ ಸಕ್ಕರೆ ಕಾರ್ಖಾನೆ ಮಾಲೀಕರೊಂದಿಗೆ ಸಭೆ ನಡೆಸಲಾಗುವುದು. ಇದೇ ವೇಳೆ ಮಧ್ಯಾಹ್ನ ರೈತ ಹೋರಾಟಗಾರರೊಂದಿಗೆ ಸಭೆ ನಡೆಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿಧಾನಸೌಧದಲ್ಲಿಂದು ನಡೆದ ರಾಜ್ಯ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಕೆಲವು ದಿನಗಳಿಂದ ಬೆಳಗಾವಿ, ಬಾಗಲಕೋಟೆ ಮುಂತಾದ ಜಿಲ್ಲೆಗಳಲ್ಲಿ ಕಬ್ಬು ಬೆಳೆಗಾರರು ಪ್ರತಿಭಟನೆಗಳನ್ನು ನಡೆಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸಚಿವರು, ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಮತ್ತು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಇಲಾಖೆಯ ಆಯುಕ್ತರಿಗೆ ಸೂಚನೆ ನೀಡಿ, ರೈತರು ಮತ್ತು ಕಾರ್ಖಾನೆಗಳ ಮಾಲೀಕರೊಂದಿಗೆ ಚರ್ಚೆ ನಡೆಸುವಂತೆ ಸೂಚಿಸಲಾಗಿತ್ತು ಎಂದು ವಿವರಿಸಿದರು.

ಅದರಂತೆ ಸಂಬಂಧಪಟ್ಟ ಸಚಿವರು, ಅಧಿಕಾರಿಗಳು ಚರ್ಚೆ ನಡೆಸಿದ್ದಾರೆ. ಶೇಕಡ ೧೧.೨೫ ರಿಕವರಿ ಬಂದರೆ, ಟನ್ ಕಬ್ಬಿಗೆ ೩ ಸಾವಿರದ ೨೦೦ ರೂಪಾಯಿ ಹಾಗೂ ಶೇಕಡ ೧೦.೨೫ ರಿಕವರಿ ಬಂದರೆ, ಟನ್ ಕಬ್ಬಿಗೆ ೩ ಸಾವಿರದ ೧೦೦ ರೂಪಾಯಿ ಪಾವತಿಸುವಂತೆ ಕಾರ್ಖಾನೆಗಳ ಮಾಲಿಕರಿಗೆ ಜಿಲ್ಲಾಧಿಕಾರಿಗಳು ಮನವೊಲಿಸಿದ್ದಾರೆ.

ಹಾಗೆಯೇ ರೈತರಿಗೂ ಮನವೊಲಿಸುವ ಕೆಲಸ ಮಾಡಿದ್ದಾರೆ. ಆದರೆ ವಿರೋಧ ಪಕ್ಷಗಳು ಈ ವಿಚಾರವನ್ನು ರಾಜಕಾರಣಕ್ಕೆ ಬಳಸುತ್ತಿದ್ದಾರೆ ಎಂದು ದೂರಿದರು.

ವಾಸ್ತವವಾಗಿ ಕೇಂದ್ರ ಸರ್ಕಾರ ಪ್ರತಿ ವರ್ಷ ಕಬ್ಬಿಗೆ ಎಫ್‌ಆರ್‌ಪಿ - ನ್ಯಾಯಯುತ ಮತ್ತು ಲಾಭದಾಯಕ ಬೆಲೆ ನಿಗದಿಪಡಿಸುತ್ತದೆ. ಅದರಂತೆ ಈ ವರ್ಷದ ಮೇ ೬ ರಂದು ಕಬ್ಬಿಗೆ ಎಫ್‌ಆರ್‌ಪಿ ನಿಗದಿಪಡಿಸಲಾಗಿದೆ. ಆದಾಗ್ಯೂ, ಕಾರ್ಖಾನೆ ಮಾಲಿಕರು ಮತ್ತು ರೈತರೊಂದಿಗೆ ನಾಳೆ ಸಭೆ ನಡೆಸಿ, ಸಮಸ್ಯೆ ಪರಿಹರಿಸಲು ಯತ್ನಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

***************

ಕಬ್ಬು ಬೆಳೆಗಾರಿರಿಗೆ ಬೆಂಬಲ ಬೆಲೆ ಪರಿಷ್ಕರಣೆ ಮಾಡಲು ಕೇಂದ್ರ ಸರ್ಕಾರಕ್ಕೆ ಅವಕಾಶವಿದ್ದು, ದರ ನಿಗದಿ ಪಡಿಸಲು ಕೇಂದ್ರ ಸರ್ಕಾರ ನಿರ್ಧಾರ ಮಾಡಬೇಕು ಎಂದು ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ಹೇಳಿದ್ದಾರೆ.

ಚಿಕ್ಕಮಗಳೂರು ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಬ್ಬು ಬೆಳೆಗಾರರು ಸೇರಿದಂತೆ ರೈತರಿಗೆ ಸಮಸ್ಯೆಗೆಳಿರುವುದು ನಿಜ. ಬೆಳೆಗೆ ಎಫ್‌ಆರ್‌ಪಿ ದರ ನಿಗದಿಪಡಿಸುವುದು ಕೇಂದ್ರ ಸರ್ಕಾರ. ಕರ್ನಾಟಕ ಮಾತ್ರವಲ್ಲದೆ ಮಹರಾಷ್ಟ್ರದಲ್ಲಿ ಕೂಡ ಹೆಚ್ಚು ಕಬ್ಬು ಬೆಳೆಗಾಗರರಿದ್ದು, ರೈತರ ಈ ರೀತಿ ಸಮಸ್ಯೆಗಳು ಬಂದಾಗ ಕೇಂದ್ರ ಸರ್ಕಾರ ರೈತರ ನೆರವಿಗೆ ಬರಬೇಕಿದೆ ಎಂದು ಆಗ್ರಹಿಸಿದರು.

ಕಾರ್ಖಾನೆಗಳ ಸಮಸ್ಯೆ ಬಗ್ಗೆ ರೈತರೊಂದಿಗೆ ಚರ್ಚೆ ನಡೆಸಲಾಗಿದೆ. ಕಬ್ಬು ಬೆಳೆಗಾರರ ಸಮಸ್ಯೆ ಪರಿಹಾರ ನಿಟ್ಟಿನಲ್ಲಿ ಸಹಕಾರ ಮುಂದುವರಿಸಲಾಗುವುದು ಎಂದು ಸಚಿವ ಚೆಲುವರಾಯಸ್ವಾಮಿ ಹೇಳಿದ್ದಾರೆ.

*****ಧ್ವನಿ **** ಎನ್. ಚೆಲುವರಾಯಸ್ವಾಮಿ

***************

ದೇಶದಲ್ಲಿ ಪೌಷ್ಟಿಕಾಂಶ ಭದ್ರತೆಯ ಗುರಿಯನ್ನು ಸಾಧಿಸಲು ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯೊಂದಿಗೆ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆ ಕೈಜೋಡಿಸುವುದಾಗಿ ಐಸಿಎಆರ್ ಮಹಾನಿರ್ದೇಶಕ ಡಾ. ಮಂಗಿಲಾಲ್ ಜಾಟ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ನಡೆದ ನಾಲ್ಕು ದಿನಗಳ ಭಾರತೀಯ ತೋಟಗಾರಿಕಾ ಸಮಾವೇಶದ ಉದ್ಘಾಟನಾ ಸಮಾರಂಭ ಉದ್ದೇಶಿಸಿ ಅವರು ಮಾತನಾಡಿದರು.

ಜೈವಿಕ ಬಲವರ್ಧಿತ ಆಹಾರಗಳು, ಕೃಷಿ ಜೈವಿಕ ವೈವಿಧ್ಯತೆ ಮತ್ತು ಸ್ಥಳೀಯ ಆಹಾರ ವ್ಯವಸ್ಥೆಯನ್ನು ಬಲಪಡಿಸಲು ಪ್ರಧಾನಮಂತ್ರಿಗಳು ನೀಡಿದ ಆದೇಶದ ಮೇರೆಗೆ ಇದೇ ೧೧ ರಂದು ನವದೆಹಲಿಯಲ್ಲಿ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯೊಂದಿಗೆ ಸಭೆ ನಡೆಸಲಾಗುವುದು ಎಂದು ಮಾಹಿತಿ ನೀಡಿದರು.

****ಧ್ವನಿ*** ಡಾ. ಮಂಗಿಲಾಲ್ ಜಾಟ್

ಭಾರತದಲ್ಲಿ ಔಷಧೀಯ ಮತ್ತು ಸುಗಂಧಭರಿತ ಸಸ್ಯಗಳನ್ನು ಉತ್ತೇಜಿಸಲು ಆಯುಷ್ ಇಲಾಖೆಯು ಐಸಿಎಆರ್‌ನೊಂದಿಗೆ ಕೆಲಸ ಮಾಡುತ್ತಿದೆ ಎಂದು ಡಾ. ಮಂಗಿಲಾಲ್ ಜಾಟ್ ಹೇಳಿದರು.

ಕೃಷಿ ವಿಜ್ಞಾನಿಗಳು, ರೈತರ ಹೊಲಗಳಿಗೆ ನೇರವಾಗಿ ಭೇಟಿ ನೀಡಿ, ತಮ್ಮ ಸಂಶೋಧನಾ ಯೋಜನೆಗಳನ್ನು ವಿನ್ಯಾಸಗೊಳಿಸುವಂತೆ ಅವರು ಕರೆ ನೀಡಿದರು.

***************

ಮಂಡ್ಯ ಜಿಲ್ಲೆಯಲ್ಲಿ ಸ್ಥಳೀಯ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕಾರ್ಖಾನೆಯನ್ನು ಸ್ಥಾಪಿಸುವ ನಿಟ್ಟಿನಲ್ಲಿ ಜಿಲ್ಲೆಯ ನಾಗಮಂಗಲ ಅಥವಾ ಮಳವಳ್ಳಿ ತಾಲೂಕಿನಲ್ಲಿ ಕನಿಷ್ಠ ನೂರು ಎಕರೆ ಜಾಗವನ್ನು ಗುರುತು ಮಾಡುವಂತೆ ಜಿಲ್ಲಾಧಿಕಾರಿ ಹಾಗೂ ಕೆಐಎಡಿಬಿ ಅಧಿಕಾರಿಗೆ ಮಂಡ್ಯ ಸಂಸದರೂ ಆದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಸೂಚಿಸಿದ್ದಾರೆ.

ಮಂಡ್ಯ ನಗರದ ಜಿಲ್ಲಾ ಪಂಚಾಯತ್‌ನ ಕಾವೇರಿ ಸಭಾಂಗಣದಲ್ಲಿಂದು ನಡೆದ ದಿಶಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಾಗ ಗುರುತಿಸಿ, ಡಿನೋಟಿಫೈ ಪ್ರಕ್ರಿಯೆ ನಡೆಸಿದರೆ, ಮುಂದೆ ಆಗಬೇಕಾದ ಕೆಲಸವನ್ನು ಕೇಂದ್ರ ಸರ್ಕಾರದ ವತಿಯಿಂದ ಮಾಡಿಸಲಾಗುವುದು ಎಂದು ತಿಳಿಸಿದರು.

***************

ಕೋಲಾರ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯನ್ನು ೨೦೨೫ರ ಹಿಂಗಾರು ಹಂಗಾಮಿನಲ್ಲಿ ಅನುಷ್ಠಾನ ಮಾಡಲು ಮಳೆ ಆಧಾರಿತ ಹುರುಳಿ ಬೆಳೆ ವಿಮೆ ಪ್ರಸ್ತಾವನೆಗಳನ್ನು ಡಿಸೆಂಬರ್ ೧ ರೊಳಗೆ ಸಲ್ಲಿಸಬಹುದು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಸುಮಾ ತಿಳಿಸಿದ್ದಾರೆ.

ರೈತರು ಅಂತಿಮ ದಿನಾಂಕದೊಳಗೆ ಪ್ರಸ್ತಾವನೆಗಳನ್ನು ತಮ್ಮ ಸೇವಾ ಕ್ಷೇತ್ರದ ಬ್ಯಾಂಕ್, ಗ್ರಾಮ-ಒನ್ ಅಥವಾ ಸಿ.ಎಸ್.ಸಿ ಕೇಂದ್ರಗಳಲ್ಲಿ ಸಲ್ಲಿಸಿ ನೋಂದಣಿ ಮಾಡಿಕೊಳ್ಳಬಹುದು. ರೈತರು ನೋಂದಣಿಗಾಗಿ ಕಡ್ಡಾಯವಾಗಿ ಫ್ರೂಟ್ಸ್ ಐಡಿ ಹೊಂದಿರಬೇಕು ಹಾಗೂ ೨೦೨೫-೨೬ ನೇ ಸಾಲಿನ ಹಿಂಗಾರು ಬೆಳೆ ಸಮೀಕ್ಷೆಯಲ್ಲಿ ಕಡ್ಡಾಯವಾಗಿ ಬೆಳೆಯನ್ನು ನಮೂದಿಸಿರಬೇಕು ಎಂದು ವಿವರಿಸಿದ್ದಾರೆ.

ರೈತರು ಪ್ರೀಮಿಯಂ ಮೊತ್ತ ೧೨೪.೪೫ ರೂಪಾಯಿಗಳನ್ನು ಪಾವತಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಸುಮಾ ಮಾಹಿತಿ ನೀಡಿದ್ದಾರೆ.

***************

ಸಮಗ್ರ ಮೀನುಗಾರಿಕೆ ಕ್ಷೇತ್ರದ ಅಭಿವೃದ್ಧಿಯ ದೃಷ್ಟಿಯಿಂದ ೫ನೇ ರಾಷ್ಟ್ರೀಯ ಸಮುದ್ರ ಮೀನುಗಾರಿಕೆ ಗಣತಿ-೨೦೨೫, ಡಿಸೆಂಬರ್ ೧೮ ರವರೆಗೆ ದೇಶದ ಎಲ್ಲಾ ಕರಾವಳಿ ರಾಜ್ಯಗಳಲ್ಲಿ ನಡೆಯುತ್ತಿದೆ.

ಕೇಂದ್ರ ಮೀನುಗಾರಿಕೆ ಸಚಿವಾಲಯದ ವತಿಯಿಂದ ಭಾರತದ ೪ ಸಾವಿರ ಕರಾವಳಿ ಗ್ರಾಮಗಳಲ್ಲಿ ವಾಸಿಸುವ ೧೨ ಲಕ್ಷಕ್ಕೂ ಹೆಚ್ಚು ಮೀನುಗಾರರ ಕುಟುಂಬಗಳನ್ನು

ಒಳಗೊಂಡು, ಈ ಮಾಹಿತಿ ಸಂಗ್ರಹಣಾ ಯೋಜನೆಯನ್ನು ಕೇಂದ್ರ ಸಮುದ್ರ ಮೀನುಗಾರಿಕೆ ಸಂಶೋಧನಾ ಸಂಸ್ಥೆ ನಡೆಸುತ್ತಿದೆ.

ಈ ರಾಷ್ಟ್ರೀಯ ಸಮುದ್ರ ಮೀನುಗಾರಿಕೆ ಗಣತಿ-೨೦೨೫ ರ ಕುರಿತು ಹೆಚ್ಚಿನ ಮಾಹಿತಿ ನೀಡಿದ ಕಾರವಾರ ಕೇಂದ್ರಿಯ ಮೀನುಗಾರಿಕಾ ಸಂಶೋಧನಾ ಕೇಂದ್ರದ ವಿಜ್ಞಾನಿ ಡಾ.ಮಹೇಶ ವಿ., 'ಸ್ಮಾರ್ಟ್ ಮೀನುಗಾರಿಕೆಗಾಗಿ ಸ್ಮಾರ್ಟ್ ಗಣತಿ' ಘೋಷ ವಾಕ್ಯದೊಂದಿಗೆ ಈ ಬಾರಿಯ ಗಣತಿ ನಡೆಯುತ್ತಿದೆ. ತರಬೇತಿ ಪಡೆದ ಗಣತಿದಾರರು, ಮೀನುಗಾರರ ಮನೆಗಳಿಗೆ ಭೇಟಿ ನೀಡಿ, ಮೊಬೈಲ್ ಆಪ್ ಬಳಸಿ ಮಾಹಿತಿ ಸಂಗ್ರಹಿಸಲಿದ್ದಾರೆ. ಎಲ್ಲಾ ಮೀನುಗಾರರು ಗಣತಿಗೆ ಸಹಕರಿಸಿ, ಮಾಹಿತಿಯನ್ನು ನೀಡುವಂತೆ ಅವರು ಮನವಿ ಮಾಡಿದ್ದಾರೆ.

***************

ಕಳೆದ ಹಲವು ತಿಂಗಳಿಂದ ವೇತನ ಇಲ್ಲದೆ ಸಂಕಷ್ಟದಲ್ಲಿ ಸಿಲುಕಿರುವ ಮಂಡ್ಯ ನಗರದ ಐತಿಹಾಸಿಕ ಮೈಷುಗರ್ ಶಾಲೆಯ ಶಿಕ್ಷಕರ ನೆರವಿಗೆ ಧಾವಿಸಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಲೋಕಸಭೆ ಸದಸ್ಯನಾಗಿ ತಮ್ಮ ಈವರೆಗಿನ ವೇತನವನ್ನು ಶಿಕ್ಷಕರ ವೇತನ ಪಾವತಿಸಲು ಕೊಡುವುದಾಗಿ ಘೋಷಿಸಿದ್ದಾರೆ.

ಮೈಷುಗರ್ ಶಾಲೆಯ ಆವರಣದಲ್ಲಿಂದು ಅತ್ಯಾಧುನಿಕ ಶಾಲಾ ವಾಹನವನ್ನು ಮೈಷುಗರ್ ಶಾಲೆಯ ಆಡಳಿತ ಮಂಡಳಿಗೆ ಹಸ್ತಾಂತರ ಮಾಡಿದ ನಂತರ ಮಾತನಾಡಿದ ಅವರು, ಶಿಕ್ಷಕರು ವೇತನವಿಲ್ಲದೆ ಕೆಲಸ ಮಾಡುತ್ತಿರುವುದು ಬಹಳ ನೋವಿನ ವಿಚಾರ. ಈವರೆಗೂ ಸುಮಾರು ೨೦ ಲಕ್ಷ ರೂಪಾಯಿ ಬಾಕಿ ವೇತನವಿದೆ. ಹೀಗಾಗಿ ತಮ್ಮ ವೇತನದ ಮೊತ್ತವನ್ನೇ ದೇಣಿಗೆಯಾಗಿ ನೀಡಲಾಗುವುದು ಎಂದು ಹೇಳಿದರು.

*******ಮುಕ್ತಾಯ*******